# ಶಿಕ್ಷಕರ ವರ್ಗಾವಣೆ ನಿಯಮಾವಳಿ ಬದಲಾವಣೆಗೆ ಆಗ್ರಹಿಸಿ ಮನವಿ



ಗೋಕಾಕ: ನೂತನವಾಗಿ ರಚಿಸಲ್ಪಟ್ಟಿರುವ ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವರ್ಗಾವಣೆ ನೀತಿ ನಿಯಮಾವಳಿಗಳಲ್ಲಿ ಸಾಕಷ್ಟು ಬದಲಾವಣೆ ಆಗಬೇಕೆಂದು ಆಗ್ರಹಿಸಿ ರಾಜ್ಯ ಸರಕಾರಿ ನೌಕರರ ಸಂಘದ ಗೋಕಾಕ ಘಟಕದ ವತಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ರಾಜ್ಯ ಸರಕಾರಕ್ಕೆ ಮನವಿ ಸಲ್ಲಿಸಿದರು.

ಮನವಿಯಲ್ಲಿ ಹೊಸ ವರ್ಗಾವಣೆ ಮಾರ್ಗಸೂಚಿಯಿಂದ ಶಿಕ್ಷಕರಿಗೆ ಆಗುವ ತೊಂದರೆಗಳನ್ನು ವಿವರಿಸಿ ತಾಲೂಕಿನಲ್ಲಿ ಶೇ.25 ಖಾಲಿ ಹುದ್ದೆಗಳಿದ್ದರೆ ವರ್ಗಾವಣೆಗೆ ಅವಕಾಶವಿರುವದಿಲ್ಲ. ಬದಲಾಗಿ ಎಲ್ಲ ತಾಲೂಕುಗಳಿಗೂ ಮುಕ್ತ ಅವಕಾಶ ನೀಡಬೇಕು. ಪರಸ್ಪರ ವರ್ಗಾವಣೆಗೆ 7 ವರ್ಷ ಕಡ್ಡಾಯ ಸೇವೆ ಬದಲಾಗಿ ಈ ಮೊದಲಿನ 3 ವರ್ಷ ಸೇವೆಯಂತೆ ಮುಂದುವರೆಸುವದು. ಹೊರಗಿನ ವರ್ಗಾವಣೆ ಮೀತಿಯನ್ನು ಶೇ.2 ಬದಲಾಗಿ ಶೇ.5ಕ್ಕೆ ಹೆಚ್ಚಿಸಬೇಕು. ಪ್ರಸ್ತುತ ಕಾರ್ಯ ನಿರ್ವಹಿ ಸುತ್ತಿರುವ ಶಾಲೆಯ ಸೇವಾ ಅವಧಿಯನ್ನು ಪರಿಗಣಿಸಿ ಸೇವಾ ಹಿರಿತನಕ್ಕೆ ಆದ್ಯತೆ ನೀಡಬೇಕು. ಪತಿ–ಪತ್ನಿ ಪ್ರಕರಣಗಳಲ್ಲಿ ಸರಕಾರಿ ನೌಕರರಾಗಿದ್ದರೆ ಆದ್ಯತೆ ನೀಡಿ ಅರೆ ಸರಕಾರಿ ನೌಕರರಿಗೂ ಅವಕಾಶ ನೀಡಬೇಕೆಂದು ಮನವಿಯಲ್ಲಿ ಆಗ್ರಹಿಸಿದ್ದಾರೆ.ವರ್ಗಾವಣೆಯಲ್ಲಿ ಪುರುಷ ಮಹಿಳೆ ತಾರತಮ್ಯ ತೆಗೆದು ಸೇವಾ ಜೇಷ್ಠತೆ ವರ್ಗಾವಣೆಯಲ್ಲಿ ಆದ್ಯತೆ ನೀಡಬೇಕು. ಹಿಂದೀ ಭಾಷಾ ಮತ್ತು ದೈಹಿಕ ಶಿಕ್ಷಣ ಶಿಕ್ಷಕರಿಗೆ ಕೌನ್ಸಲಿಂಗದಲ್ಲಿ ಹುದ್ದೆಗಳ ಸಮಸ್ಯೆ ಇದ್ದು, 6 ರಿಂದ 8 ನೇ ತರಗತಿಯವರೆಗೆ ಖಾಲಿ ಹುದ್ದೆಗಳನ್ನು ನೀಡುವದು. ಮುಖ್ಯೋಪಾಧ್ಯಾಯರ ವರ್ಗಾವಣೆಯಲ್ಲಿ ಶೇಕಡಾ ಮಿತಿ ನಿಗದಿಗೊಳಿಸದೆ ಖಾಲಿ ಇರುವ ಎಲ್ಲ ಹುದ್ದೆಗಳಿಗೆ ಅವಕಾಶ ನೀಡಬೇಕು. ಪ್ರಸಕ್ತ ಸಾಲಿನಲ್ಲಿ ವಿಕಲಚೇತನ ಶಿಕ್ಷಕರಿಗೆ ಸೇವಾವಧಿಯಲ್ಲಿ ಒಂದು ಬಾರಿ ಮಾತ್ರ ವರ್ಗಾವಣೆಗೆ ಅವಕಾಶ ನೀಡಿದ್ದು ಈ ನಿಯಮವನ್ನು ರದ್ದುಗೊಳಿಸಿ ಮೊದಲಿನಂತೆ ಆದ್ಯತೆ ನೀಡಬೇಕು. ವಲಯ ವರ್ಗಾವಣೆಯಲ್ಲಿ ದಂಪತಿ ಪ್ರಕರಣಗಳಿಗೆ ವಿನಾಯಿತಿ ನೀಡುವ ಮೂಲಕ ಶಿಕ್ಷಕರಿಗೆ ಅನುಕೂಲ ಮಾಡಿ ಕೊಡಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಮಾಸ್ಕ ಹಾಗೂ ಸ್ಯಾನಿಟೈಸರ್ ವಿತರಿಸಲು ರಾಜ್ಯ ಸರಕಾರಿ ನೌಕರರ ಸಂಘದ ಗೋಕಾಕ ಘಟಕದಿಂದ 10 ಸಾವಿರ ರೂ.ಗಳ ಚೆಕ್‌ನ್ನು ನೀಡಲಾಯಿತು.ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ವಿ.ಆರ್. ಮುರಗೋಡ, ಪದಾಧಿಕಾರಿಗಳಾದ ಬಿ.ಎ.ಮಾಲದಿನ್ನಿ, ಪಿ.ಆರ್ .ಧನ್ಯಾಳಮತ, ಎಸ್.ಬಿ.ಕಟ್ಟೀಮನಿ, ಅಶೋಕ ಮೇತ್ರಿ, ಟಿ.ಬಿ.ಬಿಲ್, ಎ.ಎಮ್.ಬಡಿಗೇರ, ಬಿ.ಎಮ್. ಶಿವಾಪೂರ ಸೇರಿದಂತೆ ಅನೇಕರು ಇದ್ದರು.

# ಭೂ ಕಾಯ್ದೆ ತಿದ್ದುಪಡಿ ಕೈ ಬಿಡುವಂತೆ ಮನವಿ

ಯರಗಟ್ಟಿ : ಯರಗಟ್ಟಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ, ಶ್ರೀರಾಮ ಸೇನೆ, ಡಿ ಎಸ್ ಎಸ್ ಸಂಘಟನೆ ಇವರ ನೇತೃತ್ವದಲ್ಲಿ ಭೂ ಕಾಯ್ದೆ ತಿದ್ದುಪಡಿ ಕೈ ಬಿಡಬೇಕು ಮತ್ತು ಚೀನಾದ ವಸ್ತುಗಳನ್ನು ನಿಷೇಧಿಸುವಂತೆ ಒತ್ತಾಯಿಸಿ ಉಪತಹಶೀಲ್ದಾರರ ಮುಂಖಾತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು . ಗಡಿಯಲ್ಲ ಚೀನಾದೊಂದಿಗೆ ನಡೆದ ಸಂಘರ್ಷದಲ್ಲಿ ಹುತಾತ್ಮರಾದ ದೇಶದ ವೀರಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಿನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ರೈತ ಸಂಘದ ತಾಲೂಕಾ ಅಧ್ಯಕ್ಷರಾದ ಪ್ರವೀಣ ಪಟಾತರ, ರೈತ ಸಂಘದ ಜಿಲ್ಲಾ ಸಂಚಾಲಕರಾದ ಸಮೀರ ಜಮಾದರ, ತಾಲೂಕಾ ಡಿ ಎಸ್ ಎಸ್ ಮುಖಂಡರಾದ ಪ್ರಕಾಶ ಚನ್ನಮೇತ್ರಿ, ಶ್ರೀರಾಮ ಸೇನಾ ತಾಲೂಕಾ ಅಧ್ಯಕ್ಷರಾದ ಸುರೇಶ ಭಜಂತ್ರಿ, ಕರವೆ ಅಧ್ಯಕ್ಷರಾದ ರಫೀಕ ಡಿ. ಕೆ, ಆಕಾಶ ಕೋರಿ, ಪ್ರವೀಣ ಕಂಬಾರ, ಶ್ರೀದೇವಿ ನಾಯಿಕ, ರಾಜಶ್ರೀ ರೇಣಕೇಗೌಡರ, ಸರೋಜಾ ಮುಕ್ಕಣ್ಣವರ ಮುಂತಾದವರು ಉಪಸ್ಥಿತರಿದ್ದರು.

# ವ್ಯಾಪಾರಿಗಳಿಗೆ ಬೆದರಿಕೆ ಇಬ್ಬರ ಬಂಧನ



ಬೆಳಗಾವಿ ; ವ್ಯಾಪಾರಸ್ಥರು ಮತ್ತು ಬಿಲ್ಡರ್ಗಳಿಗೆ ಫೋನ್ ಮಾಡಿ ಜೀವ ಬೆದರಿಕೆ ಹಾಕುತ್ತಿದ್ದ ಇಬ್ಬರನ್ನು ಬೆಳಗಾವಿಯ ಪೊಲೀಸರು ಬಂಧಿಸಿದ್ದಾರೆ .
ಬೆಳಗಾವಿಯ ಶಾಸ್ತ್ರಿ ನಗರದಲ್ಲಿರುವ ಪ್ರಥಮೇಶ್ ಗಣಿಕೊಪ್ಪ ಮತ್ತು ಬೈಲಹೊಂಗಲ ತಾಲ್ಲೂಕಿನ ಚಿಕ್ಕನಂದಿಹಳ್ಳಿಯ ವಿಶಾಲ್ ಸಿಂಗ್ ಚೌಹಾಣ್ ಬಂಧಿತರಾಗಿದ್ದಾರೆ .ಈ ಸಂಬಂಧ ದೂರಿನ ಹಿನ್ನೆಲೆಯಲ್ಲಿ ಆರೋಪಿಗಳ ಬಂಧನಕ್ಕೆ ಬೆಳಗಾವಿಯ ಖಡೇಬಜಾರ್ ಪೊಲೀಸರು ಜಾಲ ಬೀಸಿದ್ದರು .ಬಂಧಿತರಿಂದ ಒಂದು ಕಾರು ಒಂದು ಮೋಟರ್ ಸೈಕಲ್ ಮಾರಕಾಸ್ತ್ರಗಳು ಮತ್ತು ಮೊಬೈಲ್ ಫೋನ್ ಗಳನ್ನು ವಶಪಡಿಸಿಕೊಳ್ಳಲಾಗಿದೆ .ನಗರದ ವಿವಿಧ ಪೊಲೀಸ್ ಠಾಣೆಗಳಲ್ಲಿ ವಿವಿಧ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳು ಭಾಗಿಯಾಗಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ ಬೆಳಗಾವಿಯ ಖಡೇ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಮುಂದಿನ ತನಖೆ ನಡೆದಿದೆ .

# ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಸಕಲ ಸಿದ್ಧತೆ : ಬಳಿಗಾರ



ಗೋಕಾಕ: ಕೊರೋನಾ ಆತಂಕದ ಹಿನ್ನಲೆಯಲ್ಲಿ ಮುಂದೂಡಲಾಗಿದ್ದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ಜೂನ್–25 ರಿಂದ ಪ್ರಾರಂಭವಾಗಲಿದ್ದು, ಅದಕ್ಕಾಗಿ ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ತಾಲೂಕಾಡಳಿತ ಅಗತ್ಯ ಮುಂಜಾಗೃತ ಕ್ರಮ ಕೈಗೊಳ್ಳುವ ಮೂಲಕ ಪರೀಕ್ಷೆ ಯಶಸ್ವಿಗೆ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಬಿ.ಬಳಗಾರ ಹೇಳಿದರು.
ರವಿವಾರದಂದು ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಪತ್ರಕರ್ತರೊಂದಿಗೆ ಅವರು ಮಾತನಾಡುತ್ತಿದ್ದರು.
ಎಸ್‌ಎಸ್‌ಎಲ್‌ಸಿ ಪೂರ್ವಭಾವಿಯಾಗಿ ಕಳೆದ ಹಲವಾರು ದಿನಗಳಿಂದ ಸುಮಾರು 8 ಸಭೆಗಳನ್ನು ನಡೆಸಿ, ಗೋಕಾಕ ವಲಯದಲ್ಲಿ ಒಟ್ಟು 15 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಒಟ್ಟು ಕೊಠಡಿಗಳ ಸಂಖ್ಯೆ 226 ಇದ್ದು, ಹೆಚ್ಚುವರಿ 3 ಪ್ರತಿರೂಪ ಕೇಂದ್ರಗಳನ್ನು ತೆರೆಯಲಾಗಿದೆ. ಗಂಡು–2316, ಹೆಣ್ಣು 1930, ಪುನರಾವರ್ತಿತ–74, ವಲಸೆ 70 ಒಟ್ಟು 4390 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಒಂದು ಕೊಠಡಿಯಲ್ಲಿ 18 ರಿಂದ 20 ವಿದ್ಯಾರ್ಥಿಗಳಿಗೆ ಮಾತ್ರ ವ್ಯವಸ್ಥೆ ಮಾಡಲಾಗಿದೆ. ವಿದ್ಯಾರ್ಥಿಗಳ ಜ್ಞಾನ ಮಟ್ಟವನ್ನು ಹೆಚ್ಚಿಸುವ ಸಲುವಾಗಿ, ಪರೀಕ್ಷಾ ಭಯ ನಿವಾರಣೆಗೆ ಮತ್ತು ಆತ್ಮಸ್ಥೈರ್ಯವನ್ನು ತುಂಬಲು ವಲಯದ ಎಲ್ಲ ಶಿಕ್ಷಕರು ವಿದ್ಯಾರ್ಥಿಗಳೊಂದಿಗೆ ಮೋಬಾಯಿಲ್ ಮೂಲಕ ಸಂಪರ್ಕಿಸಿ ಶ್ರಮವಹಿಸಿ ತಮ್ಮ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.
ಪರೀಕ್ಷೆ ನಡೆಯುವ 3 ದಿನಗಳ ಮುಂಚೆ, ಪರೀಕ್ಷೆಯ ಹಿಂದಿನ ದಿನ ಮತ್ತು ಒಂದೊಂದು ವಿಷಯಗಳ ಪರೀಕ್ಷೆ ಮುಗಿದ ನಂತರ ಸ್ಯಾನಿಟೈಸರ್ ಸಿಂಪಡಣೆ ಮಾಡಲು ಸ್ಥಳೀಯ ಗ್ರಾ.ಪಂ. ಪ.ಪಂ. ಪುರಸಭೆ, ನಗರಸಭೆಯವರಿಗೆ ಸೂಚಿಸಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಇಲಾಖೆಯ ಇಬ್ಬರು ಸಿಬ್ಬಂದಿ ಪರೀಕ್ಷೆ ಮುಗಿಯುವರೆಗೂ ಕಾರ್ಯನಿರ್ವಹಿಸಲಿದ್ದು ಒರ್ವ ಸ್ಟಾಪ್ ನರ್ಸ ಎ.ಎನ್.ಎಮ್. ಸಿಬ್ಬಂದಿಯಿಂದ ಪ್ರಥಮ ಚಿಕಿತ್ಸೆಗೆ ನೀಡಲು ವ್ಯವಸ್ಥೆ ಮಾಡಲಾಗಿದೆ. ಕೇಂದ್ರಕ್ಕೆ ಪ್ರವೇಶಿಸುವ ಪರೀಕ್ಷಾ ಸಿಬ್ಬಂದಿಗಳಿಗೆ ಕಡ್ಡಾಯವಾಗಿ 7.30 ಗಂಟೆಗೆ ಸ್ಥಳದಲ್ಲಿ ಇರಲು ಸೂಚಿಸಲಾಗಿದ್ದು ಅವರಿಗೆ ಮೊದಲು ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು. ಪ್ರತಿ ವಿದ್ಯಾರ್ಥಿಗಳನ್ನು ಥರ್ಮಲ್ ಸ್ಕ್ಯಾನಿಂಗ್ ಮಾಡಲಾಗುವುದು. ಈಗಾಗಲೇ ವಿದ್ಯಾರ್ಥಿಗಳಿಗೆ ಮಾಸ್ಕ ಹಾಗೂ ಸ್ಯಾನಿಟೈಸರ್ ವಿತರಿಸಲಾಗಿದೆ ಎಂದು ತಿಳಿಸಿದರು.
ಪರೀಕ್ಷೆ ವೇಳೆ ಯಾವುದೇ ವಿದ್ಯಾರ್ಥಿ ಶೀತ, ಕೆಮ್ಮು, ಜ್ವರದಿಂದ ಬಳಲುತ್ತಿದ್ದು ಕಂಡು ಬಂದರೇ ಪ್ರತ್ಯೇಕ ಕೊಠಡಿ ವ್ಯವಸ್ಥೆ ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಸೆಕ್ಷನ್ 144 ಕಲಂ ನಿಷೇಧಾಜ್ಞೆ ಜಾರಿಯಲ್ಲಿರುವುದರಿಂದ ಪಾಲಕರು ಪರೀಕ್ಷಾ ಕೇಂದ್ರಗಳತ್ತ ಸುಳಿಯಬಾರದು. ಭದ್ರತೆಗೆಗಾಗಿ ಪೋಲೀಸ ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ. ಫೋನ ಮೂಲಕ ಪ್ರತಿಯೊಬ್ಬ ವಿದ್ಯಾರ್ಥಿಗಳನ್ನು ಸಂಪರ್ಕಿಸಿದ ಪ್ರಕಾರ ಪರೀಕ್ಷೆಗೆ ಹಾಜರಾಗಲು 28 ರೂಟ್‌ಗಳನ್ನು ಗುರಿತಿಸಲಾಗಿದ್ದು, 49 ಕೇರ್ ಟೇಕರ್‌ರನ್ನು ನಿಯೋಜಿಸಲಾಗಿದೆ. 38 ಬಸ್, 7 ಖಾಸಗಿ ವಾಹನಗಳ ವ್ಯವಸ್ಥೆಯನ್ನು ಮಾಡಲಾಗಿದೆ. ಸ್ವಂತ ವಾಹನದಲ್ಲಿ 2085, ಕಾಲ್ನಡಿಗೆಯಿಂದ 1538. ಬಸ್ ಮುಖಾಂತರ 697 ವಿದ್ಯಾರ್ಥಿಗಳು ಪರೀಕ್ಷೆಗೆ ಆಗಮಿಸಲಿದ್ದಾರೆ ಎಂದು ತಿಳಿಸಿದರು.
ಹೆಲ್ಪ್ ಡೆಸ್ಕ್: ಪ್ರತಿಯೊಂದು ಪರೀಕ್ಷಾ ಕೇಂದ್ರದಲ್ಲಿ ಇಬ್ಬರು ಶಿಕ್ಷಕರನ್ನೊಳಗೊಂಡ ಹೆಲ್ಪ್ ಡೇಸ್ಕ್ ತೆರೆಯಲಾಗುವುದು. ಈಗಾಗಲೇ ಪ್ರತಿಯೊಬ್ಬ ವಿದ್ಯಾರ್ಥಿಗಳನ್ನು ಸಂಪರ್ಕಿಸಿ ಅವರ ಕೇಂದ್ರ, ಕೊಠಡಿ ಸಂಖ್ಯೆ, ಡೆಸ್ಕ್ ಇರುವ ಸ್ಥಳವನ್ನು ಖಚಿತ ಪಡಿಸಿ ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ನೀಡಲಾಗಿದೆ. ಮೋಬಾಯಲ್‌ಗಳನ್ನು ಬಳಕೆ ನಿಷೇಧಿಸಲಾಗಿದೆ.
ಸಾಮಾಜಿಕ ಅಂತರ ಕಾಪಾಡಿ: ವಿದ್ಯಾರ್ಥಿಗಳು ತಮ್ಮ ಪ್ರವೇಶ ಪತ್ರದೊಂದಿಗೆ ಪರೀಕ್ಷೆಗೆ ಅವಶ್ಯಕವಿರುವ ವಸ್ತುಗಳನ್ನು ತರಬೇಕು. ಶುದ್ಧ ಕುಡಿಯುವ ನೀರು, ಉಪಹಾರ, ತಮಗೆ ಅಗತ್ಯವಿರುವ ಮೇಡಿಷನ್ ತರಬೇಕು. ಪಾಲಕರು ಪರೀಕ್ಷೆ ನಿರ್ಭಯವಾಗಿ ಸುಸೂತ್ರವಾಗಿ ನಡೆಯಲು ಶಿಕ್ಷಣ ಇಲಾಖೆಯೊಂದಿಗೆ ಸಹಕಾರ ನೀಡಬೇಕು ಸಿ.ಸಿ.ಕ್ಯಾಮರಾ ಕಣ್ಗಾವಲಿನಲ್ಲಿ ಪರೀಕ್ಷೆಗಳು ಜರುಗಲಿವೆ.
ಸಹಾಯವಾಣಿ: ಪರೀಕ್ಷೆ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೊ.9480695043–9902715414, ನೂಡಲ್ ಅಧಿಕಾರಿ ಬಿ.ಎಮ್.ವಣ್ಣೂರ 9448191916, ಬಿಆರ್‌ಸಿ ಸಮನ್ವಯ ಅಧಿಕಾರಿ 9480695057 ಸಂಪರ್ಕಿಸಬಹುದು.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ ಯಶಸ್ವಿಗೊಳಿಸಲು ಎಲ್ಲ ರೀತಿಯ ಸಹಕಾರ : ಸಚಿವ ಶ್ರೀಮಂತ ಪಾಟೀಲ



ಅಥಣಿ : ಎಸ್‌ಎಸ್‌ಎಲ್‌ಸಿ ಪರೀಕ್ಷೆ ಯಶಸ್ವಿಗೊಳಿಸಲು ಎಲ್ಲ ರೀತಿಯ ಸಹಕಾರ ನೀಡಲು ನಾನು ಸಿದ್ಧನಿದ್ದೇನೆ ಎಂದು ಜವಳಿ ಇಲಾಖೆ ಸಚಿವ ಶ್ರೀಮಂತ ಪಾಟೀಲ ಅಧಿಕಾರಿಗಳಿಗಳಿಗೆ ಭರವಸೆ ನೀಡಿದರು.
ಕಾಗವಾಡ ಕ್ಷೇತ್ರ ಶಿಕ್ಷಣಾಧಿಕಾರಿ ವ್ಯಾಪ್ತಿಯಲ್ಲಿಯ 6 ಎಸ್.ಎಸ್.ಎಲ್.ಸಿ ಪರೀಕ್ಷಾ ಕೇಂದ್ರಗಳ 2200 ವಿದ್ಯಾರ್ಥಿಗಳು ಮತ್ತು ಸುಪರವೈಸರ್ಗಳಿಗೆ ಸ್ಯಾನಟೈಸರ್ ಮತ್ತು ಮಾಸ್ಕ್‌ಗಳನ್ನು ಶ್ರೀಮಂತ ಪಾಟೀಲಫೌಂಡೇಶನ ವತಿಯಿಂದ ಜವಳಿ ಇಲಾಖೆ ಸಚಿವ ಶ್ರೀಮಂತ ಪಾಟೀಲ ವಿತರಿಸಿದರು. ಕಾಗವಾಡ ಪ್ರಭಾರಿ ಬಿಇಓ ಸಿ.ಎಂ.ಸಾಂಗಲೆ, ಅಥಣಿ ಡಿವೈಎಸ್‌ಪಿ ಎಸ್.ವ್ಹಿ.ಗಿರೀಶ, ಸಿಪಿಐ ಶಂಕರಗೌಡ ಬಸನಗೌಡರ, ಪಿಎಸ್‌ಐ ಹನುಮಂತ ಧರ್ಮಟ್ಟಿ, ನೋಡಲ್ ಅಧಿಕಾರಿ ಎಸ್.ಬಿ.ಪಾಟೀಲ, ಕ್ಷೇತ್ರ ಸಮನ್ವಯ ಅಧಿಕಾರಿ ಆರ್.ಎಸ್.ಖಡಾಖಡಿ, ಮುಖ್ಯಾಧ್ಯಾಪಕರಾದ ಎಸ್.ಡಿ.ಬೂವಾ, ಕೆ.ಡಿ.ಹೊನ್ನಾಯಿಕ, ಎಂ.ಎನ್.ಕಾಳೆನಟ್ಟಿ, ಸೇರಿದಂತೆ ಇನ್ನು ಹಲವರು ಉಪಸ್ಥಿತರಿದ್ದರು.

# ಯೋಗ ಕೇವಲ ಆಸನಾಭ್ಯಾಸವಲ್ಲ: ಮನ್ನಿಕೇರಿ



ಮೂಡಲಗಿ: ಮನುಷ್ಯನಿಗೆ ಮಾನಸಿಕ ನೆಮ್ಮದಿಯನ್ನು ನೀಡುವ ಅಪೂರ್ವ ಶಕ್ತಿಯು ಯೋಗ ದಲ್ಲಿದೆ ಎಂದು ಮೂಡಲಗಿ ಕ್ಷೇತ್ರ ಶಿಕ್ಷಣಾಧಿಕಾರಿ ಅಜೀತ ಮನ್ನಿಕೇರಿ ಹೇಳಿದರು.

ಅವರು ನಾಗಲಿಂಗ ನಗರದ ಮಧು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸೇವಾ ಸಂಘ ಕಾರ್ಯಲಯದ ಆವರಣದಲ್ಲಿ ಎನ್.ವಾಯ್.ಕೆ ಬೆಳಗಾವಿ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಬೆಳಗಾವಿ, ಮಂಜುನಾಥ ಸೈನಿಕ ತರಬೇತಿ ಕೇಂದ್ರ, ಗಾರ್ಡನ್ ಅಭಿವೃದ್ಧಿ ಸಂಸ್ಥೆ ಆಶ್ರಯದಲ್ಲಿ ಏರ್ಪಡಿಸಿದ್ದ ವಿಶ್ವ ಯೋಗ ದಿನಚರಣೆ ಕಾರ್ಯಕ್ರಮಕ್ಕೆ ಸಸಿಗೆ ನೀರು ಹನಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಯೋಗ ಕೇವಲ ಆಸನಾಭ್ಯಾಸವಲ್ಲ ಮನುಷ್ಯನಲ್ಲಿ ಅಡಗಿರುವ ದೈವತ್ವವನ್ನು ಜಾಗೃತಗೊಳಿಸಿ ನಮ್ಮ ಜೀವನದ ಗುರಿಯತ್ತ ನಮ್ಮನ್ನು ಕೈ ಹಿಡಿದು ಮುನ್ನಡೆಸುತ್ತದೆ. ಅದಕ್ಕಾಗಿ ನಾವು ಯೋಗಕ್ಕೆ ಶರಣಾಗಬೇಕು. ಇಂದಿನ ವೇಗದ ವ್ಯವಸ್ಥೆಯಲ್ಲಿ ಮನುಷ್ಯನ ದೇಹ ಮತ್ತು ಮನಸ್ಸಿನ ಮೇಲೆ ಸಾಕಷ್ಟು ಒತ್ತಡ ಬೀಳುತ್ತಿದ್ದು, ಅಂಥ ಒತ್ತಡದಿಂದ ಮುಕ್ತರಾಗಲು ನಿತ್ಯ ಯೋಗವನ್ನು ರೂಢಿಸಿಕೊಳ್ಳುವುದು ಅವಶ್ಯವಿದೆ ಎಂದರು.ಮಂಜುನಾಥ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಎಲ್.ವಾಯ್.ಅಡಿಹುಡಿ ಯೋಗಾಸನ ಮಾಡಿಸಿ ಮಾತನಾಡಿ ವಿಶ್ವಕ್ಕೆ ಭಾರತ ಕೊಟ್ಟ ಕೊಡುಗೆ ಯೋಗ. ಯೋಗೋ ರಕ್ಷತಿ ರಕ್ಷಿತಃ ಎಂಬ ಉಕ್ತಿಯಂತೆ ಮಾನವ ಸಂಕುಲವನ್ನು ರಕ್ಷಿಸುವಲ್ಲಿ ಯೋಗವು ಅತ್ಯಂತ ಪ್ರಮುಖ ಪಾತ್ರ ನಿರ್ವಹಿಸುತ್ತದೆ. ಯೋಗಾಭ್ಯಾಸವನ್ನು ರೂಢಿಸಿಕೊಳ್ಳುವುದರಿಂದ ಆರೋಗ್ಯ ರಕ್ಷಣೆ ಹಾಗೂ ರೋಗಗಳನ್ನು ನಿಯಂತ್ರಿಸಬಹುದು ಎಂದರು. ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಬೆಳಗಾವಿ ಜಿಲ್ಲಾಧ್ಯಕ್ಷ ಸಿದ್ದಣ್ಣ ದುರದುಂಡಿ ಮಾತನಾಡಿ, ರೋಗ ಬಂದ ಮೇಲೆ ಯೋಗ ಮಾಡುವ ಬದಲು ರೋಗ ಬರದಂತೆ ಇಂದಿನಿಂದಲೇ ಯೋಗ ಮಾಡಿ ಆರೋಗ್ಯವಂತರಾಗಿ ಎಂದು ಹೇಳಿದರು.ಮಧು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸೇವಾ ಸಂಘ ಅಧ್ಯಕ್ಷೆ ಅಕ್ಕಮಾಹಾದೇವಿ ಗೋಡ್ಯಾಗೋಳ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.ನಾಗನೂರ ಶ್ರೀ ಜಗದ್ಗುರು ರೇಣುಕಾಚಾರ್ಯ ಶಿವಲಿಂಗ ಆಶ್ರಮದ ಮಾತೋಶ್ರೀ ಕಾವ್ಯಶ್ರೀ ಅಮ್ಮನವರ ಯೋಗಾಸನದ ವಜ್ರಾಸನ, ಆದಿಮುದ್ರ, ಚಿನ್ಮಯಿ ಮುದ್ರ, ಮತ್ತು ವಿವಿದ ಆಸನಗಳನ್ನು ಮಾಡಿಸಿ ಆರ್ಶಿವಚನ ನೀಡಿದರು.
ಕಾರ್ಯಕ್ರಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಯುವಕ ಸಂಘದ ಅಧ್ಯಕ್ಷ ಯಲ್ಲಾಲಿಂಗ ವಾಳದ, ಗಾರ್ಡನ ಅಭೀವೃದ್ಧಿ ಸಂಸ್ಥೆ ಕಾರ್ಯದರ್ಶಿ ಸುಭಾಸ ಗೋಡ್ಯಾಗೋಳ, ಯುವ ಜೀವನ ಸೇವಾ ಸಂಸ್ಥೆ ಅಧ್ಯಕ್ಷ ಈರಪ್ಪಾ ಢವಳೇಶ್ವರ. ಎನ್.ವಾ.ಸಿ.ಲಕ್ಷ್ಮೀಬಾಯಿ ಮಾದರ, ಅಕ್ಕಮಾಹಾದೇವಿ ಜೊಕಾನಟ್ಟಿ, ಗೀತಾ ಅಟಮಟ್ಟಿ, ಶಿಕ್ಷಕ ಬಿ.ಎ.ಡಾಂಗೆ, ರೇವತಿ ಮರಡಿ, ಮಂಜನಾಥ ರೇಳೆಕರ, ಸಿದ್ದವ್ವಾ ಅಡಿಹುಡಿ, ಲಕ್ಷ್ಮಣ ಸಾಯನ್ನವರ ಹಾಗೂ ಸಂಘದ ಪದಾದಿಕಾರಿಗಳು ಮತ್ತಿತರರು ಭಾಗವಹಿಸಿದ್ದರು.

# ಅಗಸರು, ಕ್ಷೌರಿಕರಿಗೆ ರೂ. 5 ಸಾವಿರ ಪರಿಹಾರ : ಆನ್‌ಲೈನ್ ಅರ್ಜಿ ಆಹ್ವಾನ

ಕೊಪ್ಪಳ, ಜೂ.22–: ಲಾಕ್‌ಡೌನ್ ಹಿನ್ನೆಲೆಯಲ್ಲಿ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮೂಲಕ ಅಗಸರು ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಅಸಂಘಟಿತ ಕಾರ್ಮಿಕರಿಗೆ ಒಂದು ಬಾರಿ 5000 ರೂ.ಗಳ ಪರಿಹಾರ ವಿತರಿಸಲಾಗುತ್ತಿದ್ದು, ಅಗಸರು ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಸೌಲಭ್ಯ ಪಡೆಯಲು ಸೇವಾ ಸಿಂಧು ಪೋರ್ಟಲ್‌ನಲ್ಲಿ ಇಲಾಖೆಯ ವೆಬ್‌ಸೈಟ್ **https://sevasindhu.karnataka.gov.in** ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದಲ್ಲಿ, ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಫಲಾನುಭವಿಗಳಿಗೆ ಆಧಾರ ಸಂಖ್ಯೆಗೆ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ಪರಿಹಾರವನ್ನು ವರ್ಗಾಯಿಸಲಾಗುವುದು. ಕರ್ನಾಟಕದ ಅಗಸ ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ (ಕುಟುಂಬದಲ್ಲಿ ಒಬ್ಬರಿಗೆ ಮಾತ್ರ) ಪರಿಹಾರ ಪಡೆಯಲು ಅರ್ಹರಾಗಿದ್ದು, ಫಲಾನುಭವಿಗಳ ವಯೋಮಿತಿ 18 ರಿಂದ 65 ವರ್ಷದೊಳಗಿರಬೇಕು. ರಾಜ್ಯದಲ್ಲಿ ಬಿಪಿಎಲ್ ಕಾರ್ಡ ಹೊಂದಿರಬೇಕು, ಕಡ್ಡಾಯವಾಗಿ ಆಧಾರ ಸಂಖ್ಯೆ ಲಿಂಕ್ ಆಗಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಫಲಾನುಭವಿಗಳ ಪೂರಕ ದಾಖಲೆಗಳಾದ ಅಗಸ, ಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ ಕುರಿತು ನಿಗಧಿತ ನಮೂನೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅಥವಾ ಕಾರ್ಯದರ್ಶಿಗಳಿಂದ, ನಗರ ಪ್ರದೇಶಗಳಲ್ಲಿ ನಗರಸಭೆ ಅಥವಾ ಪುರಸಭೆ ಅಥವಾ ಪಟ್ಟಣ ಪಂಚಾಯತಿಯ ಕಂದಾಯ ಅಧಿಕಾರಿ ಅಥವಾ ಕಂದಾಯ ನಿರೀಕ್ಷಕರು, ತಾಲೂಕು ಮಟ್ಟದಲ್ಲಿ ಕಂದಾಯ ಇಲಾಖೆಯ ತಹಶೀಲ್ದಾರರು ಅಥವಾ ಉಪತಹಶೀಲ್ಧಾರರು ಕಂದಾಯ ಅಧಿಕಾರಿಗಳು ಅಥವಾ ಕಂದಾಯ ನಿರೀಕ್ಷಕರು, ಕಾರ್ಮಿಕ ಇಲಾಖೆಯ ಸಹಾಯಕ ಕಾರ್ಮಿಕ ಆಯುಕ್ತರು ಅಥವಾ ಕಾರ್ಮಿಕ ಅಧಿಕಾರಿಗಳು ಅಥವಾ ಹಿರಿಯ ಕಾರ್ಮಿಕ ನಿರೀಕ್ಷಕರು ಅಥವಾ ಕಾರ್ಮಿಕ ನಿರೀಕ್ಷಕರುಗಳಿಂದ ಪಡೆದ ಉದ್ಯೋಗ ದೃಡಿಕರಣ ಪತ್ರ, ನಿಗಧಿತ ನಮೂನೆಯಲ್ಲಿ ಸ್ವಯಂಘೋಷಣೆ ಪತ್ರ, ಬಿ.ಪಿ.ಎಲ್ ಕಾರ್ಡ, ಆಧಾರ ಕಾರ್ಡ, ಜನ್ಮ ದಿನಾಂಕ ದಾಖಲೆ ಹಾಗೂ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರದೊಂದಿಗೆ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಜೂನ್ 30ರೊಳಗಾಗಿ ಸಲ್ಲಿಸಬೇಕು.

ಕೊಪ್ಪಳ ತಾಲೂಕಿನ ಕಾರ್ಯನಿರ್ವಹಣಾಧಿಕಾರಿ ವೆಂಕೋಬಪ್ಪ (ಮೊ.ಸಂ.9480871105), ಗಂಗಾವತಿ ಕಾರ್ಯನಿರ್ವಹಣಾಧಿಕಾರಿ ಡಾ. ಮೋಹನ್ (9538373948), ಕುಷ್ಟಗಿ ಕಾರ್ಯನಿರ್ವಹಣಾಧಿಕಾರಿ ತಿಮ್ಮಪ್ಪ (9480871011), ಯಲಬುರ್ಗಾದ ಕಾರ್ಯನಿರ್ವಹಣಾಧಿಕಾರಿ ಡಾ. ಜಯರಾಮ್‌ಚೌಹಾನ್ (7483092417 ), ಕುಕನೂರು ಕಾರ್ಯನಿರ್ವಹಣಾಧಿಕಾರಿ ಡಾ. ಜಯರಾಮ್‌ಚೌಹಾನ್ (7483092417), ಕನಕಗಿರಿ ಯ ಕಾರ್ಯನಿರ್ವಹಣಾಧಿಕಾರಿ ಅರುಣ್‌ಕುಮಾರ್ (8150910578), ಕಾರಟಗಿಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ್ (9480871005) ಹಾಗೂ ಕೊಪ್ಪಳ ನಗರಸಭೆ (ದೂ.ಸಂ.08593–230192) ಮತ್ತು ಪೌರಾಯುಕ್ತ ಮಂಜುನಾಥ ಟಿ.ಎ. (ಮೊ.ಸಂ.9742138927), ಗಂಗಾವತಿಯ ನಗರಸಭೆ ಪೌರಾಯುಕ್ತ ಕೆ.ಸಿ.ಗಂಗಾಧರ (ಮೊ.ಸಂ.9632673062 ಮತ್ತು ಕಚೇರಿ ದೂ.ಸಂ.08533–230243), ಕುಷ್ಟಗಿ ಪುರಸಭೆ ಮುಖ್ಯಾಧಿಕಾರಿ ಅಶೋಕ ಪಾಟೀಲ್ (9945429875 – 08536–267041), ಯಲಬುರ್ಗಾ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಮಹೇಶ್ ನಿಡಶೇಸಿ (9741377297 – 08534–220138) ಮತ್ತು, ಕುಕನೂರು ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಸಂಕನಗೌಡ (9606298948–08534–230845), ತಾವರಗೇರಾ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಶಂಕರ ಕಾಳೆ. (9341241838 – 08536–275301), ಕನಕಗಿರಿ ಪಟ್ಟಣ ಪಂಚಾಯತ್ ಅಧಿಕಾರಿ ಎಂ. ತಿರುಮಲ (ಮೊ.ಸಂ.7338094762 – 08533–240224) ಹಾಗೂ ಭಾಗ್ಯನಗರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಮಂಜುನಾಥ ಬೆಲ್ಲದ್ (9448034199 – 08539–234243)ಗೆ ಕರೆ ನಾಡುವ ಮುಖಾಂತರ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದು.ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಅಥವಾ ವ್ಯಾಪ್ತಿಯ ಅಧಿಕಾರಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಹಾಗೂ ದೂರುಗಳಿದ್ದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ವೀಣಾ ಮಾಸ್ತಿ ಅವರ ಮೊ.ಸಂ.9886620694 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ವೃಂದಗಳ ಅಗ್ನಿಶಾಮಕ ಇಲಾಖೆಯಲ್ಲಿ 1567 ಹುದ್ದೆಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ, ಜೂನ್ 22–: ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯು ವಿವಿಧ ವೃಂದಗಳ ಅಗ್ನಿಶಾಮಕ ಸಿಬ್ಬಂದಿಯ 1567 ಹುದ್ದೆಗಳಿಗೆ ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಅಗ್ನಿಶಾಮಕ ಠಾಣಾಧಿಕಾರಿಗಳ 36 ಹುದ್ದೆಗಳು, ಅಗ್ನಿಶಾಮಕ ಚಾಲಕರ 227 ಹುದ್ದೆಗಳು, ಚಾಲಕ ತಂತ್ರಜ್ಞರ 82 ಹುದ್ದೆಗಳು ಹಾಗೂ ಅಗ್ನಿಶಾಮಕರ 1222 ಹುದ್ದೆಗಳಿಗೆ ಈ ನೇಮಕಾತಿ ಒಳಗೊಂಡಿದೆ. ವೆಬ್‌ಸೈಟ್ ತಿತಿತಿ.ಇಠಿ.ರಣಿಟಿ ಲಾಗ್‌ಇನ್ ಆಗಿ ಜೂನ್ 22 ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸಲು ಜುಲೈ 20 ಕೊನೆಯ ದಿನಾಂಕವಾಗಿದೆ.

ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಗೆ ಸೇರ್ಪಡೆಯಾಗಿ ಅಮೂಲ್ಯ ಜೀವಗಳನ್ನು ರಕ್ಷಿಸಲು ಇದೊಂದು ಸದಾವಕಾಶವಾಗಿದೆ ಎಂದು ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.24 ರಂದು ಮುಜರಾಯಿ, ಮೀನುಗಾರಿಕೆ ಇಲಾಖೆ ಸಚಿವರ ಕೊಡಗು ಜಿಲ್ಲಾ ಪ್ರವಾಸ

ಮಡಿಕೇರಿ ಜೂ.22:–ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಾದ ಕೋಟ ಶ್ರೀನಿವಾಸ ಪೂಜಾರಿ ಅವರು ಜೂನ್, 24 ರಂದು ಕೊಡಗು ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಮಾನ್ಯ ಸಚಿವರು ಜೂನ್, 24 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೊಡಗು ಜಿಲ್ಲೆಯ ಮುಜರಾಯಿ, ಮೀನುಗಾರಿಕೆ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ನಂತರ ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಯವರ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಬಿ.ಉದಯ ಕುಮಾರ್ ಶೆಟ್ಟಿ ಅವರು ತಿಳಿಸಿದ್ದಾರೆ.

## ಕೋವಿಡ್–19 : ಗುಣಮುಖರಾದ ಮೂವರು ಇಂದು ಆಸ್ಪತ್ರೆಯಿಂದ ಬಿಡುಗಡೆ

ಕೊಪ್ಪಳ ಜೂ.22–: ಕೊಪ್ಪಳ ಜಿಲ್ಲೆ ಕೋವಿಡ್–19 ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳ ಸಂಖ್ಯೆ: ಪಿ–7103, ಪಿ– 7453 ಮತ್ತು ಪಿ–7451 ಇವರು ಕೋವಿಡ್‌ನಿಂದ ಗುಣಮುಖರಾಗಿದ್ದು, ಅವರನ್ನು ಇಂದು ಜಿಲ್ಲಾ ಕೋವಿಡ್ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಯಿತು.

ಇವರಿಗೆ ಕೋವಿಡ್–19 ಪಾಸಿಟಿವ್ ಎಂದು ದೃಢಪಟ್ಟ ಹಿನ್ನಲೆಯಲ್ಲಿ ಜಿಲ್ಲಾ ಕೋವಿಡ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ. ಚಿಕಿತ್ಸೆ ಯಶಸ್ವಿಯಾದ ನಂತರ ಮತ್ತಮ್ಮೊ ಇವರ ಗಂಟಲು ದ್ರವವನ್ನು ಪರೀಕ್ಷೆಗೆ ಒಳಪಡಿಸಿದಾಗ ಈ ವ್ಯಕ್ತಿಗಳ ಕೋವಿಡ್ ವರದಿ ನೆಗಟಿವ್ ಎಂದು ಬಂದ ಕಾರಣ ಇವರನ್ನು ಬಿಡುಗಡೆ ಮಾಡಲಾಯಿತು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎಸ್.ಬಿ. ದಾನರೆಡ್ಡಿ ಅವರು ಪ್ರಕಟಣೆ ತಿಳಿಸಿದ್ದಾರೆ.

## ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಪೋನ್ ಇನ್ ಕಾರ್ಯಕ್ರಮ : ಜೂನ್ 25 ರಿಂದ ಜುಲೈ 04ರವರೆಗೆ

ಕೊಪ್ಪಳ ಜೂ.22 –: ಕೊಪ್ಪಳ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ 2020–21ನೇ ಸಾಲಿನ ಜೂನ್–ಜುಲೈ ಮಾಹೆಯಲ್ಲಿ ನಡೆಯುವ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಪೂರ್ವ ಸಿದ್ದತೆ ಮತ್ತು ವ್ಯವಸ್ಥಿತವಾಗಿ ನಡೆಯುವ ಕುರಿತು ಇದೇ ಜೂನ್ 25 ರಿಂದ ಜುಲೈ 04ರಂದು ಮಧ್ಯಾಹ್ನ 03 ರಿಂದ ಸಂಜೆ 05 ಗಂಟೆಯವರೆಗೆ ನಗರದ ಉಪನಿರ್ದೇಶಕರ ಕಚೇರಿಯಲ್ಲಿ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಪೋನ್ ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಉಪನಿರ್ದೇಶಕ ದೊಡ್ಡಬಸಪ್ಪ ನೀರಲಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯ ಉಪನಿರ್ದೇಶಕರು ಹಾಗೂ ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಜರಿದ್ದು, ವಿದ್ಯಾರ್ಥಿಗಳು ಹಾಗೂ ಪಾಲಕರು ತಮ್ಮ ಅಭಿಪ್ರಾಯ ಮತ್ತು ಸಂದೇಹಗಳನ್ನು ಅಧಿಕಾರಿಗಳೊಂದಿಗೆ ಪೋನ್ ಇನ್ ಕಾರ್ಯಕ್ರಮದಲ್ಲಿ ಕರೆ ಮಾಡಿ ತಮಗೆ ಸೂಕ್ತ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಜಿಲ್ಲಾ ಉಪನಿರ್ದೇಶಕ ದೊಡ್ಡಬಸಪ್ಪ ನೀರಲಕೇರಿ ಮೊ.ಸಂ.9448999346, ಕೊಪ್ಪಳ ಕ್ಷೇತ್ರ ಶಿಕ್ಷಣಾಧಿಕಾರಿ ಉಮಾದೇವಿ ಸೊನ್ನದ ಅವರ ಮೊ.ಸಂ.9480695279, ಗಂಗಾವತಿಯ ಸೋಮಶೇಖರಗೌಡ ಮೊ.ಸಂ.9480695278, ಯಲಬುರ್ಗಾದ ಶರಣಪ್ಪ ವಟಗಲ್ ಮೊ.ಸಂ.9480695281, ಕುಷ್ಟಗಿಯ ಚನ್ನಬಸಪ್ಪ ಎಂ. ಮೊ.ಸಂ.9480695280 ಹಾಗೂ ವಿಷಯ ಪರಿವೀಕ್ಷಕರು ಹಾಗೂ ನೋಡಲ್ ಅಧಿಕಾರಿಗಳಾದ ಸುಜಾತಾ ಮೊ.ಸಂ.9448973573 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.